# ಮೈಸೂರು ವಿಶ್ವವಿದ್ಯಾನಿಲಯ

(ನ್ಯಾಕ್ ಸಂಸ್ಥೆಯ ಮರು ಮಾನ್ಯತೆಯಲ್ಲಿ 'ಎ' ಗ್ರೇಡ್ ಪಡೆದಿದೆ.
(ಎನ್‌ಐಆರ್‌ಎಫ್-204: ರಾಜ್ಯ ಸಾರ್ವಜನಿಕ ವಿಶ್ವ ವಿದ್ಯಾನಿಲಯ ವರ್ಗದಲ್ಲಿ 19ನೇ ಸ್ಥಾನ, ವಿಶ್ವ ವಿದ್ಯಾನಿಲಯ ವರ್ಗದಲ್ಲಿ 54ನೇ ಸ್ಥಾನ ಮತ್ತು ಒಟ್ಟಾರೆ ವರ್ಗದಲ್ಲಿ 86ನೇ ಸ್ಥಾನ)

ಕುಲಸಚಿವ (ಪರೀಕ್ಷಾಂಗ)ರವರ ಕಛೇರಿ
ವಿಶ್ವವಿದ್ಯಾನಿಲಯ ಕಾರ್ಯಸೌಧ,
ಕ್ರಾಫರ್ಡ್ ಭವನ, ಮೈಸೂರು-570 005,

ಸಂಖ್ಯೆ: ಪ.ವಿ. ಆರ್.ವಿ/2023-24

ದಿನಾಂಕ: 24-03-2025

## ಪ್ರಕಟಣೆ

ಜುಲೈ/ಆಗಸ್ಟ್-2024ರಲ್ಲಿ ನಡೆದ B.Tech ಪದವಿ ಪರೀಕ್ಷೆಯ ನಾಲ್ಕು ಮತ್ತು ಆರನೇ ಸೆಮಿಸ್ಟರ್, ಮತ್ತು B.P.Ed ಪದವಿಯ ಎರಡು ಮತ್ತು ನಾಲ್ಕನೇ ಸೆಮಿಸ್ಟರ್‌ನ ಫಲಿತಾಂಶಗಳನ್ನು ಪ್ರಕಟಿಸಲಾಗಿದ್ದು, ಈ ಸಂಬಂಧ ವಿದ್ಯಾರ್ಥಿಗಳು ಆನ್‌ಲೈನ್ ಮುಖಾಂತರ ಮರುಮೌಲ್ಯಮಾಪನ/ಉತ್ತರ ಪತ್ರಿಕೆಯ ನಕಲು ಪ್ರತಿ ಪಡೆಯಲು ಈ ಕೆಳಕಂಡಂತೆ ದಿನಾಂಕಗಳನ್ನು ನಿಗದಿಪಡಿಸಿದೆ.

| ಕ್ರಮ ಸಂಖ್ಯೆ | ವಿವರ | ದಿನಾಂಕ |
|---|---|---|
| 1 | ಉತ್ತರ ಪತ್ರಿಕೆಗಳ ಜೆರಾಕ್ಸ್ ಪ್ರತಿ ಪಡೆಯಲು ಕೊನೆಯ ದಿನಾಂಕ | 26-03-2025 ರಿಂದ 28-03-2025 |
| 2 | ಮರುಮೌಲ್ಯಮಾಪನಕ್ಕೆ ವಿದ್ಯಾರ್ಥಿಗಳು ಆನ್‌ಲೈನ್ ಮುಖಾಂತರ ಶುಲ್ಕ ಪಾವತಿಮಾಡಿ ಅರ್ಜಿಗಳನ್ನು ಅಪ್‌ಲೋಡ್ ಮಾಡಲು ಕೊನೆಯ ದಿನಾಂಕ: | 29-03-2025 ರಿಂದ 03-04-2025 |
| 3 | ಮರುಮೌಲ್ಯಮಾಪನ(ಸ್ನಾತಕ ಪದವಿ) ಶುಲ್ಕ (ಪ್ರತಿ ಪತ್ರಿಕೆಗೆ) | ರೂ. 1597-00 |
| 4 | ಉತ್ತರ ಪತ್ರಿಕೆಗಳ ಜೆರಾಕ್ಸ್ ಪ್ರತಿಗೆ (ಪ್ರತಿ ಪತ್ರಿಕೆಗೆ) | ರೂ. 971-00 |

**url:** uucms.karnataka.gov.in**ನಲ್ಲಿ ವಿದ್ಯಾರ್ಥಿಗಳಿಗೆ (Student portal) ನಲ್ಲಿ ಮರುಮೌಲ್ಯಮಾಪನ/ಉತ್ತರ ಪತ್ರಿಕೆಗಳ ಜೆರಾಕ್ಸ್ ಪ್ರತಿಗೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.**

**ಮೇಲ್ಕಂಡ ವೆಬ್‌ಸೈಟ್‌ನಲ್ಲಿ ಕಲ್ಪಿಸಿರುವ ವೆಬ್‌ಸೈಟ್ ಲಿಂಕ್ (Student portal) ನಲ್ಲಿ ಲಾಗ್‌ಇನ್ ಆದರೆ ವಿದ್ಯಾರ್ಥಿಯ ಪರೀಕ್ಷಾ ವಿವರಗಳು ದೊರೆಯುತ್ತವೆ. ನಂತರ ಯಾವ ಸೆಮಿಸ್ಟರಿನ ಯಾವ ವಿಷಯಕ್ಕೆ/ವಿಷಯಗಳಿಗೆ ಉತ್ತರ ಪತ್ರಿಕೆಯ ಜೆರಾಕ್ಸ್ ಪ್ರತಿ/ಮರುಮೌಲ್ಯಮಾಪನ/ಮರುಸಂಕಲನಕ್ಕೆ ಬೇಕಾಗಿದೆ ಎಂದು ಗುರುತಿಸಬೇಕು ಹಾಗೂ ನಿಗದಿತ ಶುಲ್ಕವನ್ನು ಪೇಮೆಂಟ್ ಲಿಂಕ್ ಮುಖಾಂತರ ಡೆಬಿಟ್/ಕ್ರೆಡಿಟ್ ಕಾರ್ಡ್/UPI ಅಥವಾ ನೆಟ್ ಬ್ಯಾಂಕಿಂಗ್ ಮುಖಾಂತರ ಪಾವತಿಸಿದ ನಂತರ ಇದರ ಮುದ್ರಿತ ಒಂದು ಪ್ರತಿಯನ್ನು ವ್ಯಾಸಂಗ ಮಾಡಿದ ಕಾಲೇಜಿಗೆ ನೀಡಿ ಸ್ವೀಕೃತಿ ಪಡೆಯಬೇಕು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 0821-2419220 ಅನ್ನು ಸಂಪರ್ಕಿಸುವುದು.**

**ಸೂಚನೆ:**

1. ಮರುಮೌಲ್ಯಮಾಪನ ಶುಲ್ಕ ಪಾವತಿಸಲು ನಿಗದಿಪಡಿಸಿರುವ ದಿನಾಂಕವನ್ನು ಯಾವುದೇ ಕಾರಣಕ್ಕಾಗಿ ವಿಸ್ತರಿಸಲಾಗುವುದಿಲ್ಲ. ಈ ಮಾಹಿತಿಯನ್ನು ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರುಗಳು/ವಿಭಾಗದ ಅಧ್ಯಕ್ಷರುಗಳು ಎಲ್ಲಾ ವಿದ್ಯಾರ್ಥಿಗಳ ಗಮನಕ್ಕೆ ತಂದು ಸೂಕ್ತ ಮಾರ್ಗದರ್ಶನ ನೀಡುವುದು.
2 ಉತ್ತರ ಪತ್ರಿಕೆಯ ನಕಲು ಪ್ರತಿಯನ್ನು ವಿದ್ಯಾರ್ಥಿಯ e-mail ವಿಳಾಸಕ್ಕೆ ಕಳುಹಿಸಿಕೊಡಲಾಗುವುದು.

**ಕುಲಸಚಿವ (ಪರೀಕ್ಷಾಂಗ)**

ಗೆ,

ಮೈಸೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಗೊಳಪಟ್ಟ ಎಲ್ಲಾ B.Tech, B.P.Ed ಪದವಿ ಕಾಲೇಜು ಪ್ರಾಂಶುಪಾಲರುಗಳಿಗೆ - ಮುಂದಿನ ಕ್ರಮಕ್ಕಾಗಿ/ಮಾಹಿತಿಗಾಗಿ.

ಪ್ರತಿ,

1. ಪರೀಕ್ಷಾ ವಿಭಾಗದ ಎಲ್ಲಾ ಅಧಿಕಾರಿಗಳು ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
2. ಹಣಕಾಸು ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
3 ಎಲ್ಲಾ ಅಧೀಕ್ಷಕರುಗಳು, ಪರೀಕ್ಷಾ ವಿಭಾಗ, ಮೈಸೂರು ವಿಶ್ವ ವಿದ್ಯಾನಿಲಯ, ಮೈಸೂರು
4. ಕುಲಪತಿಗಳು/ಕುಲಸಚಿವರು/ಕುಲಸಚಿವ(ಪರೀಕ್ಷಾಂಗ)/ಹಣಕಾಸು ಅಧಿಕಾರಿಗಳು ರವರ ಆಪ್ತ ಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
5. ಉಪ ಕುಲಸಚಿವರು(ಪ) ಪರೀಕ್ಷಾ ಸುಧಾರಣಾ ಘಟಕ, ಪರೀಕ್ಷಾ ಭವನ. ಮೈ.ವಿ.ವಿ, ಮೈಸೂರು.
6. ಕಛೇರಿ ಪ್ರತಿ